ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಗುತ್ತಿಗೆ ಕಾರ್ಮಿಕರ ಭವಿಷ್ಯ ನಿಧಿ ನೀಡದಿರುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

193 (20) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಗುತ್ತಿಗೆ ಪೌರ ಕಾರ್ಮಿಕರಿಗೆ ಭವಿಷ್ಯ ನಿಧಿ ವಂತಿಗೆಯನ್ನು ನೀಡದೆ ವಂಚಿಸಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಪೌರಕಾರ್ಮಿಕರಿಗೆ ಭವಿಷ್ಯ ನಿಧಿ ವಂತಿಗೆಯನ್ನು ನೀಡದೆ ವಂಚಿಸಿರುವ ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗಿನ ಕ್ರಮ ಜರುಗಿಸಲಾಗುವುದು ;

(ಈ) ಭವಿಷ್ಯನಿಧಿ ವಂತಿಗೆಯನ್ನು ಪಡೆಯದೇ ವಂಚನೆಗೊಳಗಾದ ಗುತ್ತಿಗೆ ಪೌರಕಾರ್ಮಿಕರಿಗೆ ಸರ್ಕಾರ ಏನು ನೆರವು ನೀಡಿದೆ ?